ದಿಃ 15-03-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಂದುವರೆದ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಃ** ವಾದಿ ಪರವಾಗಿ ಶ್ರೀ ಎ ಪಿ ಎಮ್ ವಕೀಲರಿಂದ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ಎಮ್ ಇ ನಂಬರ 1384 ಮತ್ತು 820 ರ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾರೆಯವಾಗಿ ನಿಪಿ 2 ಎಂದು, ಎಮ್ ಆರ್ ನಂಬರ ಎಚ್11/2021-2022 ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ 3 ಎಂದು, ನನ್ನ ತಂದೆ ಮತ್ತು ತಾಯಿಯ ಮರಣ ಪ್ರಮಾಣ ಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 4 ಮತ್ತು 5 ಎಂದು, ನನ್ನ ಮತ್ತು ಉಳಿದ ವಾದಿಯರ ಒಟ್ಟು 4 ಆಧಾರ ಕಾರ್ಡಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 6 ರಿಂದ 9 ಎಂದು ಗುರುತಿಸಲಾಯಿತು. ಆದ್ದರಿಂದ ನನ್ನ ದಾವೆಯನ್ನು ಡಿಕ್ರಿ ಮಾಡಲು ಕೋರುತ್ತೇನೆ.

**ಪಾಟೀ ಸವಾಲುಃ** ಪ್ರತಿವಾದಿಗಳು ಪ್ರತಿವಾದ ಪತ್ರ ಸಲ್ಲಿಸದೇ ಇರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೇ.ಕೇ.ಸರಿ ಅದೆ

ದಿವಾಣಿ ನ್ಯಾಯಧೀಶರು ಹಾಗೂ
ಪ್ರ.ದ.ನ್ಯಾದಂ., ಹಳಿಯಾಳ.